ಅ) ಬಂದಿದೆ

ಆ) ತಿಳಿದಿದೆ.

ಇ) ಗ್ರಾಮಾಂತರ ಪ್ರದೇಶದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತುಂಬಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಈ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಜಿಲ್ಲಾಧಿಕಾರಿಗಳು ಕ್ರಮ ತೆಗೆದುಕೊಳ್ಳುತ್ತಿದ್ದಾರೆ.

ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಹುದ್ದೆಭರ್ತಿ

58 (18)

ಶ್ರೀ ಬಿ.ಎಂ.ಜಯರಾಮಶೆಟ್ಟಿ (ಬೈಂದೂರು): ಮಾನ್ಯ ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ? 1998-99ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭದಲ್ಲಿ ನೇಮಕಾತಿ ಮಾಡಲಾಗುವುದೇ?

ಆ) ಸದರಿ ನೇಮಕಾತಿಯಲ್ಲಿ ವಯೋಮಿತಿಗೆ ಆದ್ಯತೆ ನೀಡಲಾಗುವುದೇ?

ಇ) ಅನುದಾನಿತ ಖಾಸಗಿ ಪ್ರಾಥಮಿಕ ಶಾಲೆಗಳಲ್ಲಿ ನೇಮಕಾತಿ ದಿನಾಂಕದಿಂದ ವೇತನ ಅನುದಾನ ಮಂಜೂರು ಮಾಡದಿರಲು ಕಾರಣಗಳೇನು?

ಈ) ನೇಮಕಾತಿ ದಿನಾಕಂದಿಂದ ಶಿಕ್ಷಕರನ್ನು ವೇತನ: ಅನುದಾನಕ್ಕೆ ಒಳಪಡಿಸುವ ವಿಚಾರ ಸರ್ಕಾರಕ್ಕಿದೆಯೇ?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು):

ಅ) ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಶಿಕ್ಷಕರ ನೇಮಕಾತಿ ಸಂಬಂಧದಲ್ಲಿ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳು ಈಗಾಗಲೇ ಪ್ರಕಟಣೆ ಹೊರಡಿಸಿದ್ದು ಆಯ್ಕೆ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಆದಷ್ಟು ತ್ವರಿತವಾಗಿ ನೇಮಕಾತಿ ಮಾಡಲಾಗುವುದು.

ಆ) ಇಲ್ಲ.

ಇ) ಸರ್ಕಾರಿ ನೀತಿಯ ಪ್ರಕಾರ ಶಿಕ್ಷಕರು ನೇಮಕಾತಿ ಅನುಮೋದನೆಯಾದ

ದಿನಾಂಕದಿಂದ ಮಾತ್ರ ವೇತನ ಅನುದಾನಕ್ಕೆ ಅರ್ಹರಾಗುತ್ತಾರೆ. ಆದರೆ ಅವರು ಸಲ್ಲಿಸಿದ ಸೇವೆಯನ್ನು ರಜೆ ಮತ್ತು ನಿವೃತ್ತಿ ವೇತನದ ಉದ್ದೇಶಕ್ಕೆ ಅರ್ಹದಾಯಕ ಸೇವೆಯೆಂದು ಪರಿಗಣಿಸಲಾಗುವುದು.

ಈ) ಇಂತಹ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಸೊರಬ ಕ್ಷೇತ್ರದಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆ.

59 (233)

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸೊರಬ): ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೊರಬ ತಾಲ್ಲೂಕಿನ ಸೊರಬ ಮತ್ತು ಆನವಟ್ಟಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಪನ್ಯಾಸಕರುಗಳಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು? ಹಾಗೂ ಯಾವಾಗ ಭರ್ತಿ ಮಾಡಲಾಗುತ್ತದೆ?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು):

ಅ) ಬಂದಿದೆ

ಆ) ಕಾಲೇಜುಗಳಲ್ಲಿ ಕಡಿಮೆ ಕಾರ್ಯಭಾರ ಇದ್ದ ಕಡೆ ಹೆಚ್ಚುವರಿ ಬೋಧಕರನ್ನು ಒಂದು ಕಾಲೇಜಿನಿಂದ ಮತ್ತೊಂದು ಕಾಲೇಜಿಗೆ ನಿಯೋಜಿಸಲು ಹಾಗೂ ಕಾಲೇಜುಗಳಲ್ಲಿ ಉದ್ಭವಿಸುವ ಹೆಚ್ಚುವರಿ ಕಾರ್ಯ ಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರನ್ನು ಆಹ್ವಾನಿಸಲು ಉದ್ದೇಶಿಸಲಾಗಿದೆ. ಖಾಲಿ ಹುದ್ದೆಗಳನ್ನು ತುಂಬಲು ಕ್ರಮಕೈಗೊಳ್ಳಲಾಗುವುದು.

ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಯಲ್ಲಿದ್ದ ಪಿ.ಡಬ್ಲ್ಯುಡಿ ಉಪವಿಭಾಗ ಸ್ಥಳಾಂತರ

60 (213)

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸೊರಬ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?